Akashvani : Bangalore
Regional Bulletin In Kannada
16.03.2025 : 18.40hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
16.03.2025 : 18.40hrs
**********

ಮುಖ್ಯಾಂಶಗಳು :

೧. ಮಂಗಳೂರು ಪೊಲೀಸರಿಂದ ೭೫ ಕೋಟಿ ರೂಪಾಯಿ ಮೌಲ್ಯದ ಮಾದಕ ದ್ರವ್ಯ ವಶ

೨. ಇಪ್ಪತ್ತೊಂದನೇ ಜಾನುವಾರು ಗಣತಿ ಪೂರ್ಣ; ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಪ್ರಥಮ ಸ್ಥಾನ

೩. ಹಾಸನ ಜಿಲ್ಲೆಯ ಬೇಲೂರಿನಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆ ಯಶಸ್ವಿ

೪. ಕಳಸಾ ಸಮೀಪದ ಭದ್ರಾ ನದಿಯಲ್ಲಿ ಮುಳಗಿ ಇಬ್ಬರು ಪ್ರವಾಸಿಗರ ಸಾವು

**********

ರಾಜ್ಯದ ಇತಿಹಾಸದಲ್ಲೇ ಅತಿದೊಡ್ಡ ಪ್ರಮಾಣದ ಮಾದಕ ದ್ರವ್ಯವನ್ನು ಪತ್ತೆಹಚ್ಚಿ, ಇಬ್ಬರು ಆರೋಪಿಗಳನ್ನು ಬಂಧಿಸಿರುವ ಮಂಗಳೂರು ನಗರ ಪೊಲೀಸರ ಕಾರ್ಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶ್ಲಾಘಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಅವರು, ಸುಮಾರು ೭೫ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ೩೭ ಕೆ.ಜಿ. ಎಂಡಿಎಂಎ ಮಾದಕ ದ್ರವ್ಯವನ್ನು ವಶಕ್ಕೆ ಪಡೆದು, ಸಾವಿರಾರು ಯುವ ಜನರ ಬದುಕಿಗೆ ಎದುರಾಗಲಿದ್ದ ಬಹುದೊಡ್ಡ ಅಪಾಯವನ್ನು ಪೊಲೀಸರು ನಿವಾರಿಸಿದ್ದಾರೆ ಎಂದು ತಿಳಿಸಿದ್ದಾರೆ. ರಾಜ್ಯಾದ್ಯಂತ ಹಬ್ಬಿರುವ ಮಾದಕ ದ್ರವ್ಯ ಜಾಲವನ್ನು ಬೇರು ಸಹಿತ ಕಿತ್ತೊಗೆಯುವುದು ರಾಜ್ಯ ಸರ್ಕಾರದ ಗುರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

**********

೨೧ನೇ ಜಾನುವಾರು ಗಣತಿ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ರಾಜ್ಯದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯು ಪ್ರಥಮ ಸ್ಥಾನ ಪಡೆದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸುಮಾರು ೨ ಲಕ್ಷದ ೯೦ ಸಾವಿರದ ೫೫೧ ರೈತರು ಪಶುಸಂಗೋಪನೆಯಲ್ಲಿ ತೊಡಗಿಕೊಂಡಿದ್ದಾರೆ. ಪಶು ಇಲಾಖೆಯಲ್ಲಿ ಒಟ್ಟು ೧೦೫ ಪಶು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ೨೧ನೇ ಜಾನುವಾರು ಗಣತಿ ಪ್ರಕಾರ, ೧ ಲಕ್ಷದ ೭೦ ಸಾವಿರದ ೭೨೦ ದನಗಳು, ೧೪ ಸಾವಿರದ ೯೨೪ ಎಮ್ಮೆಗಳು, ೧ ಲಕ್ಷದ ೧೭ ಸಾವಿರದ ೭೧೫ ಕುರಿಗಳು, ೯೫ ಸಾವಿರ ಮೇಕೆಗಳು ಜಿಲ್ಲೆಯಲ್ಲಿದೆ. ೨ ಲಕ್ಷದ ೯೩ ಸಾವಿರದ ೮೭೬

ಜಾನುವಾರುಗಳಿಗೆ ಕಾಲು ಬಾಯಿ ಲಸಿಕೆಯನ್ನು ನೀಡಲಾಗಿದೆ ಎಂದು ಪಶು ಸಂಗೋಪನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಜಗದೀಶ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೫.೫ ಲಕ್ಷ ಲೀಟರ್ ಹಾಲು ಉತ್ಪಾದನೆ ಆಗುತ್ತಿದೆ. ಜಾನುವಾರು ವಿಮೆ ಸೌಲಭ್ಯವನ್ನು ಎ.ಪಿ.ಎಲ್ ಪಡಿತರ ಚೀಟಿಗೆ ಶೇಖಡ ೫೦ ರಷ್ಟು, ಬಿ.ಪಿ.ಎಲ್ ಪಡಿತರ ಚೀಟಿಗೆ ಶೇಖಡ ೭೫ ರಷ್ಟು ನೀಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**********

ಛತ್ರಪತಿ ಶಿವಾಜಿ ಮಹಾರಾಜರು ಕೇವಲ ಮರಾಠ ಸಮಾಜಕ್ಕೆ ಸೀಮಿತವಲ್ಲ. ಇಡೀ ವಿಶ್ವಕ್ಕೆ ಆದರ್ಶ ಪುರುಷರಾಗಿದ್ದು, ರಾಷ್ಟ್ರ ನಾಯಕರಾಗಿ, ಸ್ವರಾಜ್ಯ ಸ್ಥಾಪಕರಾಗಿದ್ದಾರೆ ಎಂದು ಬೆಂಗಳೂರಿನ ಗೋಸಾಯಿ ಮಠದ ಮಂಜುನಾಥ ಸ್ವಾಮೀಜಿ ಹೇಳಿದ್ದಾರೆ. ಹಾಸನ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಾಸನಾಂಬ ಕಲಾಕ್ಷೇತ್ರದಲ್ಲಿಂದು ಆಯೋಜಿಸಿದ್ದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಂಸದ ಶ್ರೇಯಸ್ ಪಟೇಲ್, ಇಡೀ ದೇಶಕ್ಕೆ ಮಾದರಿಯದಂತಹ ಕ್ರಾಂತಿವೀರರು ಛತ್ರಪತಿ ಶಿವಾಜಿ ಮಹಾರಾಜರು. ಅವರ ಧೈರ್ಯ, ಶೌರ್ಯ, ನೇರ ನುಡಿ ಮತ್ತು ಅವರ ತತ್ವ-ಸಿದ್ಧಾಂತವನ್ನು ಅಳವಡಿಸಿಕೊಳ್ಳಬೇಕಿದೆ ಎಂದು ಹೇಳಿದರು.

**********

ಶಹಾಪುರ-ಯಾದಗಿರಿಗೆ ಸಂಪರ್ಕ ಕಲ್ಪಿಸುವ ಭೀಮಾ ನದಿಯ ಹಳೆ ಸೇತುವೆ ದುರಸ್ತಿ ಕಾರ್ಯ ಪೂರ್ಣಗೊಂಡಿದ್ದು, ಇದೇ ೨೩ ರಂದು ಸಂಚಾರಕ್ಕೆ ಮುಕ್ತವಾಗಲಿದೆ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ತಿಳಿಸಿದ್ದಾರೆ. ಯಾದಗಿರಿ ನಗರದ ಭೀಮಾ ಸೇತುವೆ ಹಾಗೂ ರೈಲ್ವೆ ಮೇಲ್ಸೇತುವೆ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲಸ ವಿಳಂಬವಾದರೂ ಕಾಮಗಾರಿ ಗುಣಮಟ್ಟದಿಂದ ಕೂಡಿದೆ. ೧ ಕೋಟಿ ರೂಪಾಯಿ ವೆಚ್ಚದಲ್ಲಿ ಭೀಮಾ ಸೇತುವೆ ದುರಸ್ತಿ ಮಾಡಲಾಗಿದ್ದು, ಸಿಸಿ ರಸ್ತೆ ನಿರ್ಮಿಸಲಾಗಿದೆ. ಇದೇ ವೇಳೆ ರೈಲ್ವೆ ಮೇಲ್ಸೇತುವೆಯ ತಡೆಗೋಡೆ ಮತ್ತು ಕಲ್ಲುಗಳನ್ನು ಅಳವಡಿಸಲು ೧ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಅವರು ವಿವರಿಸಿದರು.

**********

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಪೂರಿಗಾಲಿ ವ್ಯಾಪ್ತಿಯಲ್ಲಿ ಈಗಾಗಲೇ ಹನಿ ಮತ್ತು ತುಂತುರು ನೀರಾವರಿ ಯೋಜನೆ ಪೂರ್ಣಗೊಂಡಿದ್ದು, ಇನ್ನಷ್ಟೇ ಈ ಭಾಗದ ರೈತರು ಅನುಷ್ಠಾನ ಮಾಡಬೇಕಿದೆ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದ್ದಾರೆ. ಕಾವೇರಿ ನೀರಾವರಿ ನಿಗಮ ನಿಯಮಿತದ ವತಿಯಿಂದ ಮಳವಳ್ಳಿ ತಾಲೂಕಿನ ದೊಡ್ಡಬೂಹಳ್ಳಿ ಗ್ರಾಮದಲ್ಲಿ ನಡೆದ ಪೂರಿಗಾಲಿ ಹನಿ, ತುಂತುರು ನೀರಾವರಿ ಯೋಜನೆಯ

ಫಲಾನುಭವಿಗಳ ಜೊತೆ ಯೋಜನೆಯ ಉದ್ದೇಶ ಮತ್ತು ಆಧುನಿಕ ಕೃಷಿ ಪದ್ಧತಿಯ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಯ ಮೂಲಕ ರೈತರು ಸಾಮೂಹಿಕ ಮತ್ತು ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ಲಾಭ ಗಳಿಸಬೇಕೆಂದು ಸಲಹೆ ನೀಡಿದರು. ಯಾವ ಬೆಳೆ ಬೆಳೆಯಬೇಕು? ಎಷ್ಟು ದಿನದ ಬೆಳೆಯಾಗಿರುತ್ತದೆ ಎಂಬ ಬಗ್ಗೆ ಸಮಗ್ರ ಮಾಹಿತಿಯನ್ನು ಸಭೆಯ ಮೂಲಕ ನೀಡಲಾಗುವುದು. ಜೊತೆಗೆ ವಿಮೆ ವ್ಯಾಪ್ತಿಗೆ ಬೆಳೆಯನ್ನು ಹೇಗೆ ಒಳಪಡಿಸಬೇಕು, ಬೆಳೆ ಹಾನಿಯಾದರೆ, ವಿಮೆ ಹಣ ಸಿಗುವ ಬಗ್ಗೆ ಹಾಗೂ ಕೃಷಿ ಸಾಲ ಪಡೆಯಲು ಕೂಡ ಮಾಹಿತಿ ಒದಗಿಸಲಾಗುವುದು ಎಂದು ಅವರು ವಿವರಿಸಿದರು.

**********

ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಟಿ.ಕಾಗೇಪುರದ ಖಾಸಗಿ ವಸತಿ ಶಿಕ್ಷಣ ಸಂಸ್ಥೆಯಲ್ಲಿ ವಿಷಾಹಾರ ಸೇವಿಸಿ ವಿದ್ಯಾರ್ಥಿಯೊಬ್ಬ ಮೃತಪಟ್ಟಿದ್ದು, ಹಲವು ಮಕ್ಕಳು ತೀವ್ರವಾಗಿ ಅಸ್ವಸ್ಥಗೊಂಡ ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಘಟನೆಯ ಬಗ್ಗೆ ಮಾಹಿತಿ ತಿಳಿದ ಕೂಡಲೇ ಮಂಡ್ಯ ಜಿಲ್ಲಾಧಿಕಾರಿಗಳ ಜೊತೆ ಮಾತನಾಡಿ, ಮಕ್ಕಳಿಗೆ ಸೂಕ್ತ ಚಿಕಿತ್ಸೆಯ ವ್ಯವಸ್ಥೆ ಕಲ್ಪಿಸುವಂತೆ ಹಾಗೂ ಘಟನೆಗೆ ಕಾರಣರಾದವರ ಮೇಲೆ ಕಠಿಣ ಕ್ರಮ ಜರುಗಿಸುವಂತೆ ಸೂಚನೆ ನೀಡಲಾಗಿತ್ತು. ಇದರಂತೆ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿ, ತನಿಖೆ ಕೈಗೊಂಡಿದ್ದಾರೆ ಎಂದು ತಿಳಿಸಿದ್ದಾರೆ. ಈ ದುರ್ಘಟನೆಯಲ್ಲಿ ಮಡಿದ ಬಾಲಕನ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಲಾಗುವುದು. ಬೇರೆಡೆ ತಯಾರಿಸಿದ ಆಹಾರವನ್ನು ಸೇವಿಸುವ ಮುನ್ನ, ಅದರಲ್ಲಿಯೂ ಚಿಕ್ಕ ಮಕ್ಕಳಿಗೆ ನೀಡುವ ಮುನ್ನ ಹೆಚ್ಚು ಜಾಗೃತೆ ವಹಿಸಬೇಕು. ಅಜಾಗರೂಕತೆಗೆ ಅಮೂಲ್ಯ ಜೀವಗಳು ಬಲಿಯಾಗದಿರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

**********

ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಹಳ್ಳಿಗದ್ದೆಯ ಶಾಂತಿ ಎಸ್ಟೇಟ್‌ನಲ್ಲಿ ಒಂದು ಪುಂಡಾನೆ ಸೆರೆ ಹಿಡಿಯುವಲ್ಲಿ ಇಂದು ಅರಣ್ಯ ಇಲಾಖೆ ಯಶಸ್ವಿಯಾಗಿದೆ. ಧನಂಜಯ, ಭೀಮ, ಏಕಲವ್ಯ, ಮಹೇಂದ್ರ, ಹರ್ಷ, ಪ್ರಶಾಂತ್, ಕಂಜನ್ ಎಂಬ ಏಳು ಆನೆಗಳು ಇಂದಿನ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದವು. ಜನರಿಗೆ ಹೆಚ್ಚು ಉಪಟಳ ನೀಡುತ್ತಿದ್ದ ಸುಮಾರು ೨೦ ವರ್ಷದ ಗಂಡು ಆನೆ ಇದಾಗಿದ್ದು, ಇದನ್ನು ಪತ್ತೆ ಹಚ್ಚಿ, ಸೆರೆಹಿಡಿಯಲಾಗಿದೆ ಎಂದು ಅರಣ್ಯ ಸಂರಕ್ಷಣಾಧಿಕಾರಿ ಎಡುಕೊಂಡಲ ತಿಳಿಸಿದ್ದಾರೆ.

**********

ಚಿಕ್ಕಮಗಳೂರು ಜಿಲ್ಲೆಯ ಕಳಸ ಸಮೀಪದ ಭದ್ರಾ ನದಿಯಲ್ಲಿ ಈಜಲು ತೆರಳಿದ ಇಬ್ಬರು ಪ್ರವಾಸಿಗರು ನದಿಯಲ್ಲಿ ಮುಳುಗಿ ಮೃತಪಟ್ಟ ಘಟನೆ ಇಂದು ನಡೆದಿದೆ. ಬೆಂಗಳೂರಿನಿಂದ ಸುಮಾರು ೧೨ ಜನರ ತಂಡ ಜಿಲ್ಲೆಯ ಕಳಸ ಹಾಗೂ ಸುತ್ತು-ಮುತ್ತ ಪ್ರವಾಸಕ್ಕಾಗಿ ಆಗಮಿಸಿದ್ದರು. ಜಗದೀಶ್

ಹಾಗೂ ಚೋಟಾಸಿಂಗ್ ಎಂಬುವವರು ಇಲ್ಲಿನ ಭದ್ರಾ ನದಿಯಲ್ಲಿ ಈಜಲು ತೆರಳಿದ ವೇಳೆ ಈ ಘಟನೆ ಸಂಭವಿಸಿದೆ. ಸ್ಥಳಕ್ಕೆ ಆಗಮಿಸಿದ ಕಳಸ ಪೊಲೀಸರು ಹಾಗೂ ಈಜುಗಾರರ ತಂಡ, ನದಿಯಲ್ಲಿ ಶೋಧ ನಡೆಸಿ, ಮೃತದೇಹಗಳನ್ನು ಹೊರತೆಗೆದಿದ್ದಾರೆ.

**********

ದಾವಣಗೆರೆ ಜಿಲ್ಲೆ ನ್ಯಾಮತಿ ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ್‌ನಲ್ಲಿ ಕಳೆದ ಐದು ತಿಂಗಳ ಹಿಂದೆ ನಡೆದಿದ್ದ ಬಹುಕೋಟಿ ಚಿನ್ನಾಭರಣ ದರೋಡೆ ಪ್ರಕರಣದ ಶಂಕಿತ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ. ವಶಕ್ಕೆ ಪಡೆಯುವ ಸಂದರ್ಭದಲ್ಲಿ ಪರಾರಿಯಾಗಲು ಯತ್ನಿಸಿದ ಆರೋಪಿಯೊಬ್ಬನ ಕಾಲಿಗೆ ಪೊಲೀಸರು ಗುಂಡು ಹಾರಿಸಿದ್ದಾರೆ. ಹೊನ್ನಾಳಿ ತಾಲೂಕಿನ ಅರಬಗಟ್ಟೆ ಬಳಿ ಇಂದು ಮುಂಜಾನೆ ಈ ಘಟನೆ ನಡೆದಿದೆ. ಆರೋಪಿಗಳು ಮಾರಕಾಸ್ತ್ರಗಳಿಂದ ಪೊಲೀಸರ ಮೇಲೆ ಹಲ್ಲೆ ನಡೆಸಲು ಯತ್ನಿಸಿದ್ದು, ಘಟನೆಯಲ್ಲಿ ಪೊಲೀಸ್ ಪೇದೆಯೊಬ್ಬರು ಗಾಯಗೊಂಡಿದ್ದಾರೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ದರೋಡೆಕೋರರು ಉತ್ತರ ಭಾರತದ ಮೂಲದವರು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

**********

ಇನ್ನು ಹವಾವರ್ತಮಾನ - ರಾಜ್ಯಾದ್ಯಂತ ಒಣಹವೆ ಮುಂದುವರಿದಿದೆ. ರಾಜ್ಯದಲ್ಲಿ ಅತಿ ಹೆಚ್ಚು ಉಷ್ಣಾಂಶ ಕಲಬುರಗಿಯಲ್ಲಿ ೩೯.೮ ಡಿಗ್ರಿ ಸೆಲ್ಸಿಯಸ್ ಮತ್ತು ಅತಿ ಕಡಿಮೆ ಉಷ್ಣಾಂಶ ಚಾಮರಾಜನಗರದಲ್ಲಿ ೧೬ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಶುಭ್ರ ಆಕಾಶ; ಗರಿಷ್ಠ ೩೪ ಮತ್ತು ಕನಿಷ್ಠ ೧೯ ಡಿಗ್ರಿ ಸೆಲ್ಸಿಯಸ್ ಇರುವ ಸಾಧ್ಯತೆ ಇದೆ.

**********

**ಸಂಕ್ಷಿಪ್ತ ಸುದ್ದಿಗಳು:**

೧. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹೊರನಾಡಿನ ಘಟಕವಾಗಿರುವ ಕಾಸರಗೋಡು ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ ರಾಜ್ಯ ಸರ್ಕಾರ ೨೫ ಲಕ್ಷ ರೂಪಾಯಿ ಮಂಜೂರು ಮಾಡಿದೆ. ಇದಕ್ಕಾಗಿ ರಾಜ್ಯ ಸರ್ಕಾರಕ್ಕೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮತ್ತು ಸಂಘದ ಕಾಸರಗೋಡು ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ಧನ್ಯವಾದ ಸಲ್ಲಿಸಿದ್ದಾರೆ.

೨. ಭಾರತ ಚುನಾವಣೆ ಆಯೋಗದ ಮುಖ್ಯ ಚುನಾವಣಾಧಿಕಾರಿ ಡಾ.ಸುಖಬೀರ ಸಿಂಗ್ ಇಂದು ಕೊಪ್ಪಳ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಅಂಜನಾದ್ರಿ ಬೆಟ್ಟಕ್ಕೆ ಭೇಟಿ ನೀಡಿದ್ದರು.

೩. ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮದಲ್ಲಿ ನಿರ್ಮಾಣಗೊಂಡ ನೂತನ ಗ್ರಾಮಪಂಚಾಯತಿ ಕಾರ್ಯಾಲಯವನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಇಂದು ಉದ್ಘಾಟಿಸಿದರು.

೪. ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ೧೮ರಂದು ನೇರ ಸಂದರ್ಶನ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ೦೮೪೭೩ ೨೫೩೭೧೮ ಸಂಪರ್ಕಿಸಬಹುದು ಎಂದು ಯಾದಗಿರಿ ಉದ್ಯೋಗಾಧಿಕಾರಿ ಬಸವರಾಜ್ ತಿಳಿಸಿದ್ದಾರೆ.

*****END*****